# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1018
2. ಮಾನ್ಯ ಸದಸ್ಯರ ಹೆಸರು : ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 27.12.2022
4. ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ವಾಣಿ ವಿಲಾಸ ಸಕ್ಕರೆ ಕಾರ್ಖಾನೆಯು ಪ್ರಾರಂಭಗೊಂಡರೆ, ಎಷ್ಟು ಜನ ರೈತರಿಗೆ ಕಬ್ಬು ಬೆಳೆಯಲು ಅನುಕೂಲವಾಗಿಲಿದೆ; ಹಾಗೂ ಇದರಿಂದಾಗಿ ಎಷ್ಟು ಕಬ್ಬು ಬೆಳೆಯಲು ಅನುಕೂಲವಾಗುತ್ತದೆ? (ಸಂಪೂರ್ಣ ಮಾಹಿತಿ ಒದಗಿಸುವುದು) | ವಾಣಿ ವಿಲಾಸ ಸಹಕಾರಿ ಸಕ್ಕರೆ ಕಾರ್ಖಾನೆ., ಹಿರಿಯೂರು, ಚಿತ್ರದುರ್ಗ ಜಿಲ್ಲೆ – ಈ ಕಾರ್ಖಾನೆಯ ಕಬ್ಬು ಮೀಸಲು ಕ್ಷೇತ್ರವು ಹಿರಿಯೂರು, ಚಳ್ಳಕೆರೆ ತಾಲ್ಲೂಕುಗಳು, ಹೊಸದುರ್ಗ ತಾಲ್ಲೂಕಿನ ಮತ್ತೋಡು ಮತ್ತು ಮಾಡದಕೆರೆ ಹೋಬಳಿಗಳು, ಚಿತ್ರದುರ್ಗ ತಾಲ್ಲೂಕಿನ ಹಿರೆಗುಂಟನೂರು, ಭರಮಸಾಗರ, ಕಸಬ ಹೋಬಳಿ, ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಹುಳಿಯಾರು, ಕಂದಿಕೆರೆ ಹೋಬಳಿಗಳು ಮತ್ತು ಶಿರಾ ತಾಲ್ಲೂಕಿನ ಪೂರ್ಣ ಭಾಗ ಒಳಪಟ್ಟಿರುತ್ತದೆ.<br><br>ಈ ಕಬ್ಬು ಮೀಸಲು ಕ್ಷೇತ್ರದಲ್ಲಿ ಅಂದಾಜು 4000 ದಿಂದ 5000 ರೈತರು, ಪ್ರತಿ ಎಕರೆಗೆ ಸರಾಸರಿ 40 ಟನ್‌ನಂತೆ ಅಂದಾಜು 2 ಲಕ್ಷದಿಂದ 2.50 ಲಕ್ಷ ಟನ್ ಕಬ್ಬನ್ನು ಬೆಳೆಯಬಹುದಾಗಿರುತ್ತದೆ.<br><br>ಸಕ್ಕರೆ ನಿರ್ದೇಶನಾಲದ ಆದೇಶ ಸಂಖ್ಯೆ: ಡಿಎಸ್‌ಕೆ:ಇಎಸ್‌ಜಿಎಸ್:76/2003-04, ದಿನಾಂಕ: 01.09.2004 ರನ್ವಯ ವಾಣಿ ವಿಲಾಸ ಸಹಕಾರಿ ಸಕ್ಕರೆ ಕಾರ್ಖಾನೆ., ಹಿರಿಯೂರು, ಚಿತ್ರದುರ್ಗ ಜಿಲ್ಲೆ – ಈ ಕಾರ್ಖಾನೆಯು ಪ್ರಸ್ತುತ ಸಮಾಪನೆಯಲ್ಲಿರುತ್ತದೆ. |

ಸಂಖ್ಯೆ: ಸಿಐ 263 ಸಿಓಎಫ್ 2022

(ಶಂಕರ.ಬ.ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು